# ಜಿಲ್ಲಾ ಪಂಚಾಯತ ಕಾರ್ಯಾಲಯ, ಧಾರವಾಡ

e-mail:ceo.dwd@gmail.com ದೂರವಾಣಿ ಸಂಖ್ಯೆ:0836-2447542

ನಂ/ಧಾಜಿಪಂ/ಮುಕಾನಿಅ/ಸಿ-1/MGNERGA/AA/2021-22/ ದಿನಾಂಕ:06-01-2022

## ಅಧಿಸೂಚನೆ

* * * * *

ಮಾನ್ಯ ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ/RDC-EGS/50/2021 (E-442252)/ದಿನಾಂಕ:04-08-2021 ರ ಪತ್ರದಲ್ಲಿ ಸೂಚಿಸಿದನ್ವಯ, ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನದ ಮೇಲ್ವಿಚಾರಣೆಗಾಗಿ ತಾಲೂಕು ಪಂಚಾಯತಿಗಳು ಪ್ರಮುಖ ಪಾತ್ರ ಹೊಂದಿದ್ದು, ತಾಲೂಕು ಪಂಚಾಯತಿಗಳಿಗೆ ಮಂಜೂರಾದ ಬಹಳಷ್ಟು ಹುದ್ದೆಗಳು ಖಾಲಿ ಇರುವುದರಿಂದ ಯೋಜನೆಯ ಮೇಲ್ವಿಚಾರಣೆಗೆ ಅಡಚಣೆ ಉಂಟಾಗಿರುತ್ತದೆ. ನರೇಗಾ ಯೋಜನೆಯ ಅನುಷ್ಠಾನಕ್ಕೆ ವಿವಿಧ ಹಂತದ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮಾನವ ಸಂಪನ್ಮೂಲ ಸಂಸ್ಥೆಯ ಮೂಲಕ ಧಾರವಾಡ ಜಿಲ್ಲೆಯಲ್ಲಿ ಸನ್ 2020-21 ನೇ ಸಾಲಿನಲ್ಲಿ 1.00 ಲಕ್ಷಕ್ಕಿಂತ ಹೆಚ್ಚು ಮಾನವ ದಿನಗಳನ್ನು ಸೃಜನೆ ಮಾಡಿದ **ಅಣ್ಣಿಗೇರಿ, ಧಾರವಾಡ, ಹುಬ್ಬಳ್ಳಿ, ಕಲಘಟಗಿ, ಕುಂದಗೋಳ ಮತ್ತು ನವಲಗುಂದ** ತಾಲೂಕು ಪಂಚಾಯತಿಗಳಿಗೆ ತಲಾ ಒಬ್ಬರಂತೆ ಒಟ್ಟು 6 Administrative Assistant ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಆಯ್ಕೆ ಮಾಡಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆದ್ದರಿಂದ **ದಿನಾಂಕ:07-01-2022 ರಿಂದ 17-01-2022 ರವರೆಗೆ** ಜಿಲ್ಲಾ ಪಂಚಾಯತ ಧಾರವಾಡದ ಅಧೀಕೃತ ವೆಬ್‌ಸೈಟ್ http://zpdharwad.karnataka.gov.in ಮತ್ತು ಧಾರವಾಡ ಜಿಲ್ಲೆಯ ಅಧೀಕೃತ ವೆಬ್‌ಸೈಟ್ http://dharwad.nic.in ಮುಖಾಂತರ ನೀಡಲಾಗಿರುವ ಲಿಂಕ್‌ನಲ್ಲಿ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಬಹುದು.

**Administrative Assistant ಹುದ್ದೆಗೆ ಆನ್‌ಲೈನ್ ಅರ್ಜಿ ಸಲ್ಲಿಸಲು ಸಾಮಾನ್ಯ ಅರ್ಹತೆಗಳು:**

1. ವಿದ್ಯಾರ್ಹತೆ - ಬಿ.ಕಾಂ. ಪದವಿ ಹೊಂದಿರಬೇಕು.
2. ಕನ್ನಡ ಮತ್ತು ಇಂಗ್ಲೀಷ ಟೈಪಿಂಗ್‌ನಲ್ಲಿ ಪರಿಣಿತಿ ಹೊಂದಿರಬೇಕು.
3. M.S. Word, Excel, Power Point Presentation ಸೇರಿದಂತೆ ಉತ್ತಮ ಕಂಪ್ಯೂಟರ್ ಜ್ಞಾನ ಹೊಂದಿರಬೇಕು.

**ಆಯ್ಕೆ ವಿಧಾನ:** Administrative Assistant ಹುದ್ದೆಗಳಿಗೆ ಸೇವೆ ಪಡೆಯಲು ನಿಗದಿಪಡಿಸಿದ ವಿದ್ಯಾರ್ಹತೆಗೆ ಅನುಗುಣವಾಗಿ ಮೆರಿಟ್ ಪಟ್ಟಿ ತಯಾರಿಸಿ, ಮೆರಿಟ್ ಪಟ್ಟಿಯಲ್ಲಿನ ಅಭ್ಯರ್ಥಿಗಳು ಮೇಲೆ ತಿಳಿಸಿದ ಟೈಪಿಂಗ್ ಮತ್ತು ಕಂಪ್ಯೂಟರ್ ಜ್ಞಾನ ಹೊಂದಿರುವುದನ್ನು ಪ್ರಾಯೋಗಿಕ ಪರೀಕ್ಷೆ ಮೂಲಕ ಖಚಿತಪಡಿಸಿಕೊಂಡು ಮಾನವ ಸಂಪನ್ಮೂಲ ಸಂಸ್ಥೆಯ ಮೂಲಕ ಸೇವೆಗೆ ಪಡೆಯಲು ಕ್ರಮ ವಹಿಸಲಾಗುವುದು.

**ಮಾಸಿಕ ಸಂಭಾವನೆ:** Administrative Assistant ರವರಿಗೆ ಕಾರ್ಮಿಕ ಇಲಾಖೆಯು ತಾಲೂಕು ಮಟ್ಟದಲ್ಲಿ ಡೇಟಾ ಎಂಟ್ರಿ ಆಪರೇಟರ್ ಹುದ್ದೆಗೆ ನಿಗದಿಪಡಿಸಿದ ಕನಿಷ್ಠ ಮಾಸಿಕ ಸಂಭಾವನೆಯನ್ನು ಪಾವತಿಸುವುದು.

ಹೆಚ್ಚಿನ ಮಾಹಿತಿಗಾಗಿ ಧಾರವಾಡ ಜಿಲ್ಲಾ ಪಂಚಾಯತಿಯ ದೂರವಾಣಿ ಸಂಖ್ಯೆ:0836-2447542, 0836-2742221 ಸಂಪರ್ಕಿಸಬಹುದು.

B. Susheela

**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,**
**ಜಿಲ್ಲಾ ಪಂಚಾಯತ, ಧಾರವಾಡ.**